ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 13 ನೇ ಮಾರ್ಚ್, 2020

ಹಾಸನ ಜಿಲ್ಲೆಯ ಗ್ರಾಮೀಣ ರಸ್ತೆಗಳ ಅಭಿವೃದ್ಧಿ ಬಗ್ಗೆ

ಶ್ರೀ ಎಂ. ಎ. ಗೋಪಾಲಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

849 (958) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ 3 ವರ್ಷಗಳಲ್ಲಿ ಹಾಸನ ಜಿಲ್ಲೆಗೆ ಗ್ರಾಮೀಣ ರಸ್ತೆಗಳ ಅಭಿವೃದ್ಧಿಗಾಗಿ ಮಂಜೂರಾದ ಅನುದಾನವೆಷ್ಟು ; ಇದರಲ್ಲಿ ಬಿಡುಗಡೆಯಾದ ಅನುದಾನವೆಷ್ಟು ; ಬಿಡುಗಡೆಯಾಗದೇ ಬಾಕಿ ಉಳಿಯಲು ಕಾರಣಗಳೇನು ; ಯಾವಾಗ ಬಿಡುಗಡೆ ಮಾಡಲಾಗುವುದು ; (ವಿವರ ನೀಡುವುದು)

(ಆ) ಈ ಅನುದಾನವನ್ನು ಅಭಿವೃದ್ಧಿ ಮಾಡಿದ ರಸ್ತೆಗಳು ಯಾವುವು; ಈ ರಸ್ತೆ ಕಾಮಗಾರಿಗಳ ಮೊತ್ತವೆಷ್ಟು ; (ಕಾಮಗಾರಿಗಳನ್ನು ನಿರ್ವಹಿಸಿದ ಗುತ್ತಿಗೆದಾರರು ಯಾರು ; ಕಾಮಗಾರಿ ಹೆಸರು, ಗ್ರಾಮ ಮತ್ತು ತಾಲ್ಲೂಕಿನ ವಿವರ ನೀಡುವುದು )

(ಇ) ಗ್ರಾಮೀಣ ರಸ್ತೆಗಳ ಅಭಿವೃದ್ಧಿಗೆ ಸರ್ಕಾರವು ಯಾವ ಯಾವ ಹೊಸ ಯೋಜನೆಗಳನ್ನು ಪ್ರಸಕ್ತ ಸಾಲಿನಲ್ಲಿ ರೂಪಿಸಿದೆ ; ಸದರಿ ಯೋಜನೆಗೆ ಅನುದಾನ ನಿಗಧಿಪಡಿಸಲಾಗಿದೆಯೇ ? (ವಿವರ ನೀಡುವುದು)